
# ಮೆಟ್ರೊ ನಿಲ್ದಾಣದಲ್ಲಿ ಪುಸ್ತಕ ಮಳಿಗೆ

## ಕೇಂದ್ರ ಸಾಹಿತ್ಯ ಅಕಾಡೆಮಿ ಪ್ರಕಟಿಸಿದ ಪುಸ್ತಕಗಳು ಲಭ್ಯ

ಪ್ರಜಾವಾಣಿ ವಾರ್ತೆ



ಮೆಟ್ರೊ ನಿಲ್ದಾಣದಲ್ಲಿ ಉದ್ಘಾಟನೆಗೊಂಡ ಪುಸ್ತಕ ಮಳಿಗೆಯಲ್ಲಿನ ಪುಸ್ತಕಗಳನ್ನು ಚಂದ್ರಶೇಖರ ಕಂಬಾರ, ಜಯರಾಮರಾಜೇ ಅರಸ್, ಕನ್ನಡ ಸಾಹಿತ್ಯ ಪರಿಷತ್ತಿನ ನಿಕಟಪೂರ್ವ ಅಧ್ಯಕ್ಷ ಮನು ಬಳಿಗಾರ್ ಹಾಗೂ ಅಕಾಡೆಮಿಯ ಕಾರ್ಯದರ್ಶಿ ಕೆ. ಶ್ರೀನಿವಾಸ್ ರಾವ್ ಅವರು ಪರಿಶೀಲಿಸಿದರು.

ಬೆಂಗಳೂರು: ಕೇಂದ್ರ ಸಾಹಿತ್ಯ ಅಕಾಡೆಮಿಯು ಮೆಜೆಸ್ಟಿಕ್‌ನಲ್ಲಿರುವ ನಾಡಪ್ರಭು ಕೆಂಪೇಗೌಡ ಮೆಟ್ರೊ ನಿಲ್ದಾಣದಲ್ಲಿ ಪುಸ್ತಕ ಮಳಿಗೆಯನ್ನು ಪ್ರಾರಂಭಿಸಿದ್ದು, ಇಲ್ಲಿ ಕನ್ನಡ ಸೇರಿ 24 ಭಾಷೆಗಳ ಅಕಾಡೆಮಿ ಪ್ರಕಟಿತ ಪುಸ್ತಕಗಳು ದೊರೆಯಲಿವೆ.

ದಕ್ಷಿಣ ಭಾರತದ ಮೆಟ್ರೊ ನಿಲ್ದಾಣವೊಂದರಲ್ಲಿ ಇದೇ ಮೊದಲ ಬಾರಿಗೆ ಅಕಾಡೆಮಿ ಮಳಿಗೆ ಪ್ರಾರಂಭಿಸಿದೆ. ಮೆಟ್ರೊ ನಿಲ್ದಾಣದ 'ಎ' ಗೇಟ್‌ನ ಪ್ರವೇಶ ದ್ವಾರದಲ್ಲಿ ಮಳಿಗೆಯನ್ನು ನಿರ್ಮಿಸಲಾಗಿದೆ. ಸೋಮವಾರದಿಂದ ಶುಕ್ರವಾರದವರೆಗೆ ಬೆಳಗ್ಗೆ 10ರಿಂದ ಸಂಜೆ 6 ಗಂಟೆಯವರೆಗೆ ಮಳಿಗೆ ಕಾರ್ಯನಿರ್ವಹಿಸಲಿದೆ. ಪುಸ್ತಕಗಳ ಮೇಲೆ ಶೇ 20ರವರೆಗೆ ರಿಯಾಯಿತಿಯೂ ಇರಲಿದೆ. ಮಳಿಗೆಯಲ್ಲಿ ಇರದ, ಅಕಾಡೆಮಿ ಪ್ರಕಟಿತ ಪುಸ್ತಕಗಳನ್ನು ಗ್ರಾಹಕರು ನೀಡುವ ವಿಳಾಸಕ್ಕೆ ಕಳುಹಿಸುವ ವ್ಯವಸ್ಥೆಯನ್ನೂ ರೂಪಿಸಲಾಗಿದೆ.

ನಗರದಲ್ಲಿ ಬುಧವಾರ ನಡೆದ ಕಾರ್ಯಕ್ರಮದಲ್ಲಿ ಅಕಾಡೆಮಿ ಅಧ್ಯಕ್ಷ ಚಂದ್ರಶೇಖರ ಕಂಬಾರ ಅವರು ಮಳಿಗೆಯನ್ನು ಉದ್ಘಾಟಿಸಿ, ಮಾತನಾಡಿದರು. 'ದಕ್ಷಿಣ ಭಾರತದಲ್ಲಿ ಇದೇ ಮೊದಲ ಬಾರಿಗೆ ಬೆಂಗಳೂರಿನ ಮೆಟ್ರೊ ನಿಲ್ದಾಣದಲ್ಲಿ ಪುಸ್ತಕ ಮಳಿಗೆ ತೆರೆದಿದ್ದೇವೆ. ನವದೆಹಲಿಯ ಮೆಟ್ರೊ ನಿಲ್ದಾಣದಲ್ಲಿ ಈ ಮೊದಲು ಮಳಿಗೆ ನಿರ್ಮಿಸಿದ್ದೆವು. ಅದು ಜನಪ್ರಿಯಗೊಂಡಿದ್ದರಿಂದ ಇಲ್ಲಿಯೂ ಅಂತಹ ಮಳಿಗೆ ಪ್ರಾರಂಭಿಸಲಾಗಿದೆ. ಇದು ಜನಪ್ರಿಯವಾಗುವ ವಿಶ್ವಾಸವಿದೆ' ಎಂದು ಹೇಳಿದರು.

ನಿವೃತ್ತ ಐಎಎಸ್ ಅಧಿಕಾರಿ ಬಿ.ಆರ್. ಜಯರಾಮರಾಜೇ ಅರಸ್, 'ಕೇಂದ್ರ ಸಾಹಿತ್ಯ ಅಕಾಡೆಮಿಯು ಉತ್ತಮ ಪುಸ್ತಕಗಳನ್ನು ಪ್ರಕಟಿಸುತ್ತಿದೆ. ಕನ್ನಡ, ತಮಿಳು, ತೆಲುಗು, ಮಲಯಾಳಂ, ಹಿಂದಿ ಸೇರಿ ಅನ್ಯ ಭಾಷೆಗಳ ಗ್ರಂಥಗಳು ಇಲ್ಲಿವೆ. ಅಕಾಡೆಮಿಯ ಪುಸ್ತಕಗಳು ದೇಶದಲ್ಲಿನ ಭಾವೈಕ್ಯಕ್ಕೆ ಪ್ರೋತ್ಸಾಹ ನೀಡುತ್ತವೆ. ಈಗ ಜನಸಾಮಾನ್ಯರು ಓಡಾಡುವ ಪ್ರದೇಶದಲ್ಲಿ ಪುಸ್ತಕ ಮಳಿಗೆ ತೆರೆದಿರುವುದರಿಂದ ಸಾಹಿತ್ಯ ಹೆಚ್ಚು ಹೆಚ್ಚು ಜನರನ್ನು ತಲುಪಲಿದೆ' ಎಂದರು.

### ಪುಸ್ತಕ ಮಳಿಗೆ ವಿಸ್ತರಣೆ

'ಮುಂದಿನ ದಿನಗಳಲ್ಲಿ ಇನ್ನಷ್ಟು ಮೆಟ್ರೊ ನಿಲ್ದಾಣಗಳಲ್ಲಿ ಪುಸ್ತಕ ಮಳಿಗೆ ತೆರೆಯುವ ಆಶಯ ಹೊಂದಿದ್ದೇವೆ. ಇಡೀ ದೇಶದಲ್ಲಿ ಎಲ್ಲ ಭಾಷೆಗಳಲ್ಲಿ ಪುಸ್ತಕಗಳನ್ನು ಪ್ರಕಟಿಸುವ ಏಕೈಕ ಸಂಸ್ಥೆ ಕೇಂದ್ರ ಸಾಹಿತ್ಯ ಅಕಾಡೆಮಿ. ನಾವು ಪ್ರಕಟಿಸುವ ಪುಸ್ತಕಗಳು ದೇಶದ 24 ಭಾಷೆಗಳಿಗೂ ಭಾಷಾಂತರಗೊಳ್ಳುತ್ತವೆ. ಆದ್ದರಿಂದ ಅಕಾಡೆಮಿಯ ಬಳಿ ಸಾಹಿತ್ಯ ಪುಸ್ತಕಗಳ ಖಜಾನೆಯೇ ಇದೆ. ಈ ಖಜಾನೆಯನ್ನು ಜನಸಾಮಾನ್ಯರ ಬಳಿ ತಲುಪಿಸುವ ಪ್ರಯತ್ನವನ್ನು ಈ ಮಳಿಗೆ ಮಾಡಲಿದೆ' ಎಂದು ಚಂದ್ರಶೇಖರ ಕಂಬಾರ ಹೇಳಿದರು.